ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಏಪ್ರಿಲ್ 21, 2020**

# ಪತ್ರಿಕಾ ಪ್ರಕಟಣೆ

## ಎಲ್ಲಾ ವಲಸೆ ಕಾರ್ಮಿಕರಿಗೆ ದಿನಸಿ ಕಿಟ್ ವಿತರಣೆ : ಬಸವರಾಜ್ ಬೊಮ್ಮಾಯಿ

**ಬೆಂಗಳೂರು, ಏಪ್ರಿಲ್ 21 ( ಕರ್ನಾಟಕ ವಾರ್ತೆ ) :**

ಉದ್ಯೋಗ ಅರಸಿ ರಾಜ್ಯಕ್ಕೆ ಆಗಮಿಸಿ, ರಾಜ್ಯದಲ್ಲೇ ನೆಲೆಸಿರುವ ಎಲ್ಲಾ ವಲಸೆ ಕಾರ್ಮಿಕರಿಗೆ ದಿನಸಿ ಕಿಟ್ ( ಗ್ರಾಸರಿ ಕಿಟ್ ) ವಿತರಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ. ಇದಲ್ಲದೆ, ವಲಸೆ ಕಾರ್ಮಿಕರಿಗೆ ಪ್ರತಿ ದಿನ ಎರಡು ಲಕ್ಷ ಆಹಾರ ಪೊಟ್ಟಣಗಳನ್ನು ವಿತರಿಸಲಾಗುತ್ತಿದೆ ಎಂದು ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಅವರು ಇಲ್ಲಿ ಇಂದು ಪ್ರಕಟಿಸಿದರು.

ಕರ್ನಾಟಕ ಪೊಲೀಸ್ ಇಲಾಖೆಯ ಅಂಗ ಸಂಸ್ಥೆ ಎನಿಸಿರುವ ನಾಗರೀಕ ರಕ್ಷಣಾ ವಿಭಾಗ ಹಾಗೂ ಇಂಟರ್ ನ್ಯಾಷನಲ್ ಸೊಸೈಟಿ ಫಾರ್ ಕೃಷ್ಣಾ ಕಾನ್‌ಷಿಯಸ್‌ನೆಸ್ ( ಇಸ್ಕಾನ್ ) ನ ಅಕ್ಷಯ ಪಾತ್ರ ಫೌಂಡೇಷನ್‌ನ ಸ್ವಯಂ ಸೇವಕರು ಕಾರ್ಮಿಕ ಇಲಾಖೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗಾಗಿ ಬೆಂಗಳೂರು ಅರಮನೆಯ ತ್ರಿಪುರವಾಸಿನಿ ಆವರಣದಲ್ಲಿ ಕರ್ನಾಟಕ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಅನುದಾನದ ನೆರವಿನಿಂದ ದಿನಸಿ ಕಿಟ್ ಸಿದ್ಧಪಡಿಸುವ ಪ್ರಧಾನ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಚಟುವಟಿಕೆಗಳನ್ನು ಗಮನಿಸಿ, ಸ್ವಯಂ ಸೇವಕರೊಂದಿಗೆ ಮಾತುಕತೆ ನಡೆಸಿದ ನಂತರ ಅವರು ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದರು.

## ಗ್ರಾಸರಿ ಕಿಟ್‌ನಲ್ಲಿ ಏನಿದೆ ?

ಪ್ರತಿ ದಿನಸಿ ಕಿಟ್‌ನಲ್ಲಿ ಉತ್ತಮ ಗುಣಮಟ್ಟದ ಐದು ಕೆ ಜಿ ಅಕ್ಕಿ, ಎರಡು ಕೆ ಜಿ ತೊಗರಿ ಬೇಳೆ, 250 ಗ್ರಾಂ ಕಡಲೆ ( ದೇಸಿ ಚೆನ್ನಾ ) , 500 ಗ್ರಾಂ ರಿಫೈಂಡ್ ಆಯಿಲ್, ತಲಾ 200 ಗ್ರಾಂ ರಸಂ ಪುಡಿ ಮತ್ತು ಸಾಂಬಾರ್ ಪುಡಿ, 100 ಗ್ರಾಂ ಹಸಿಖಾರದ ಪುಡಿ, 200 ಗ್ರಾಂ ಉಪ್ಪಿನಕಾಯಿ, 500 ಗ್ರಾಂ ಸಕ್ಕರೆ, ಎರಡು ಕೆ ಜಿ ಗೋಧಿ ಹಿಟ್ಟು ಅಥವಾ ಇಡ್ಲಿ ರವೆ ಇರುತ್ತದೆ. ಪ್ರತಿ ಕಿಟ್‌ನಲ್ಲಿ ಓರ್ವ ವ್ಯಕ್ತಿ ದಿನಕ್ಕೆ ಎರಡು ಬಾರಿಯಂತೆ 21 ದಿನ ಊಟ ತಯಾರಿಸಿ ಕೊಳ್ಳುವಷ್ಟು ದಿನಸಿ ಪದಾರ್ಥಗಳಿವೆ ಎಂದು ಸಚಿವರು ಹೇಳಿದರು.

## ಸೈಲೆಂಟ್ ವಾರಿಯರ್ಸ್ !

ಕರ್ನಾಟಕ ನಾಗರೀಕ ರಕ್ಷಣಾ ಪಡೆಯನ್ನು ಅತ್ಯುತ್ತಮ ಸೇವಾ ಸಂಸ್ಥೆ ಎಂದು ಕೇಂದ್ರ ಸರ್ಕಾರ ಮನ್ನಣೆ ನೀಡಿದೆ ಎಂಬುದನ್ನು ಸ್ಮರಿಸಿದ ಬಸವರಾಜ ಬೊಮ್ಮಾಯಿ ಅವರು ಸರ್ಕಾರದಿಂದ ಯಾವುದೇ ವೇತನ ಪಡೆಯದೆಯೇ ತಮ್ಮ ವಾಹನಗಳಿಗೆ ತಮ್ಮ ವೆಚ್ಚದಲ್ಲೇ ಇಂಧನ ಭರಿಸಿ ಸ್ವಯಂ–ಪ್ರೇರಿತರಾಗಿ ಕಾರ್ಯನಿರ್ವಹಿಸುವ ನಾಗರೀಕ ರಕ್ಷಣಾ ಪಡೆಯ ಕ್ಷಿಪ್ರ ಸ್ಪಂದನಾ ತಂಡದ ಸ್ವಯಂ ಸೇವಕರನ್ನು ಸೈಲೆಂಟ್ ವಾರಿಯರ್ಸ್ ( ಸದ್ದಿಲ್ಲದೆ ಕಾರ್ಯ ನಿರ್ವಹಿಸುವ ಸೇನಾನಿಗಳು ) ಎಂದು ಬಣ್ಣಿಸಿದರು. ಅಂತೆಯೇ, ಕೊರೊನಾದಂತಹ ಕಠಿಣ ಪರಿಸ್ಥಿತಿಯಲ್ಲೂ ಸೇವಾ–ಮನೋಭಾವದೊಂದಿಗೆ ಕಾರ್ಯನಿರ್ವಹಿಸುತ್ತಿರುವ ನಾಗರೀಕ ರಕ್ಷಣಾ ಪಡೆಯ ಸ್ವಯಂ ಸೇವಕರ ಸೇವೆ ಅಭಿನಂದನೀಯ ಹಾಗೂ ಅನುಕರಣೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಕ್ಷಯ ಪಾತ್ರ ಫೌಂಡೇಷನ್‌ನ ಸಂವಹನ ವಿಭಾಗದ ಮುಖ್ಯಸ್ಥ ನವೀನ ನೀರದ ದಾಸ ಅವರು ಮಾತನಾಡಿ ಇಸ್ಕಾನ್ ಸಂಸ್ಥೆಯು ಸ್ವಯಂ–ಪ್ರೇರಿತವಾಗಿ ಈವರೆಗೆ ನಗರದ ವಿವಿಧೆಡೆಗಳಲ್ಲಿ 80,000 ಕ್ಕೂ ಹೆಚ್ಚು ದಿನಸಿ ಪದಾರ್ಥಗಳ ಕಿಟ್ ವಿತರಣೆ ಮಾಡಿದೆ. ಅಲ್ಲದೆ, ಪ್ರತಿ ದಿನವೂ ದಿನಸಿ ಕಿಟ್ ಸಿದ್ಧಪಡಿಸುವ ಕಾಯಕದಲ್ಲಿ ತನ್ನ ಪರಿಣಿತಿ ಮತ್ತು ಅನುಭವವನ್ನು ಹಂಚಿಕೊಂಡು ಸರ್ಕಾರದ ಜೊತೆಗೆ ಸಹಕರಿಸುತ್ತಿದೆ ಎಂದರು.

## ಹಂಗರ್ ಸೇವಿಯರ್ಸ್ ವಾಹನ ಪಡೆಗೆ ಚಾಲನೆ

ಇದೇ ಸಂದರ್ಭದಲ್ಲಿ ಒಂದು ನೂರಕ್ಕೂ ದ್ವಿ–ಚಕ್ರ ವಾಹನಗಳಲ್ಲಿ ಸಾಗಿ ಬಂದ ನಾಗರೀಕ ರಕ್ಷಣಾ ಪಡೆಯ ಹಂಗರ್ ಸೇವಿಯರ್ಸ್ ಸ್ವಯಂ ಸೇವಕರ ವಾಹನ ಪಡೆಗೆ ( ಹಸಿವು ನಿವಾರಕ ಸ್ವಯಂ ಸೇವಕರ ವಾಹನ ಪಡೆಗೆ ) ದಿನಸಿ ಕಿಟ್ ಹಸ್ತಾಂತರಿಸುವ ಮೂಲಕ ಗೃಹ ಸಚಿವರು ದಿನಸಿ ಕಿಟ್ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಆರಕ್ಷಕ ಮಹಾ ನಿರ್ದೇಶಕರು, ಗೃಹ ರಕ್ಷಕ ದಳದ ಮಹಾ ಸಮಾದೇಷ್ಟರು, ನಾಗರೀಕ ರಕ್ಷಕ ನಿರ್ದೇಶಕರು, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆಯ ಮಹಾ ನಿರ್ದೇಶಕ ಎ. ಎಂ. ಪ್ರಸಾದ್, ಕರ್ನಾಟಕ ನಾಗರೀಕ ರಕ್ಷಣಾ ಪಡೆಯ ಕ್ಷಿಪ್ರ ಸ್ಪಂದನಾ ತಂಡದ ಮುಖ್ಯಸ್ಥ ಡಾ ಪಿ ಆರ್ ಎಸ್ ಚೇತನ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

*******

ಡಿ ಪಿ ಎಂ : ವೈ ಸಿ ಎಸ್

## ಸಂಪೂರ್ಣ ನಿಯಂತ್ರಣದಲ್ಲಿ ಪಾದರಾಯನಪುರ : ಬಸವರಾಜ ಬೊಮ್ಮಾಯಿ

ಬೆಂಗಳೂರು, ಏಪ್ರಿಲ್ 21 ( ಕರ್ನಾಟಕ ವಾರ್ತೆ ) :

ಕೊರೊನಾ ಹಿನ್ನೆಲೆಯಲ್ಲಿ ಘೋಷಿಸಲಾಗಿದ್ದ ಲಾಕ್ ಡೌನ್ ಹಾಗೂ ಸಿಲ್ ಡೌನ್ ಉಲ್ಲಂಘಿಸಿ ವೈದ್ಯಕೀಯ ಹಾಗೂ ಅರೆ ವೈದ್ಯಕೀಯ ಸಿಬ್ಬಂದಿಯ ಮೇಲೆ ಹಲ್ಲೆ ನಡೆಸಿ ನಗರದ ಪಾದರಾಯನಪುರದಲ್ಲಿ ಗಲಭೆ ಸೃಷ್ಠಿಸಲು ಕಾರಣರಾದ 119 ಆರೋಪಿಗಳನ್ನು ಬೆಂಗಳೂರು ನಗರ ಪೋಲೀಸರು ಈಗಾಗಲೇ ಬಂಧಿಸಿದ್ದಾರೆ. ಇದೀಗ ಪಾದರಾಯನಪುರ ಸಂಪೂರ್ಣ ನಿಯಂತ್ರಣದಲ್ಲಿದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ಇಲ್ಲಿ ಇಂದು ತಿಳಿಸಿದರು.

ನಗರದ ಅರಮನೆ ಮೈದಾನದಲ್ಲಿ ದಿನಸಿ ಪದಾರ್ಥಗಳನ್ನು ಸಿದ್ಧಪಡಿಸಿ ವಲಸೆ ಕಾರ್ಮಿಕರಿಗೆ ತಲುಪಿಸುವ ಹಂಗರ್ ಸೇವಿಯರ್ಸ್ ಸ್ವಯಂ ಸೇವಕರ ವಾಹನ ಪಡೆಗೆ ಚಾಲನೆ ನೀಡಿದ ನಂತರ ಅವರು ಮಾಧ್ಯಮದವರ ಜೊತೆಯಲ್ಲಿ ಮಾತನಾಡುತ್ತಿದ್ದರು.

ಆರೋಪಿಗಳ ವಿರುದ್ಧ ರಾಷ್ಟ್ರೀಯ ಭದ್ರತಾ ಕಾಯಿದೆಯಡಿ ಕ್ರಮ ಜರುಗಿಸುವಿರಾ ? ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಷ್ಟ್ರೀಯ ವಿಪತ್ತ ನಿರ್ವಹಣಾ ಕಾಯಿದೆ ಹಾಗೂ ಸಾಂಕ್ರಾಮಿಕ ಕಾಯಿದೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಅಂತೆಯೇ, ಎಲ್ಲಾ ಹಾಟ್-ಸ್ಪಾಟ್ ಜಿಲ್ಲೆಗಳಲ್ಲೂ ಕೋವಿಡ್-19 ಕಂಟೈನ್‌ಮೆಂಟ್ ಜೋನ್‌ಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚನೆ ನೀಡಲಾಗಿದೆ ಎಂದೂ ಅವರು ಸ್ಪಷ್ಟಪಡಿಸಿದರು.

*******

ಡಿ ಪಿ ಎಂ : ವೈ ಸಿ ಎಸ್

## ಕೋವಿಡ್-19 ರ ಬಗ್ಗೆ ಜಾಗೃತಿ ಕ್ರಮಗಳು

**ಬೆಂಗಳೂರು, 21 ಏಪ್ರಿಲ್ 2020 (ಕರ್ನಾಟಕ ವಾರ್ತೆ):**

ಕೋವಿಡ್-19 ತಡೆಗಟ್ಟುವ ಹಿನ್ನಲೆಯಲ್ಲಿ ಕರ್ನಾಟಕ ಸರ್ಕಾರವು ಹಲವಾರು ಕ್ರಮಗಳನ್ನು ಕೈಗೊಂಡಿದೆ. ಈ ಕರ್ನಾಟಕ ನಾಗರೀಕ ರಕ್ಷಣಾ ಪಡೆಯು ಈ ಕಾರ್ಯಕ್ರಮಗಳನ್ನು ವಿವಿಧ ಇಲಾಖೆಗಳೊಂದಿಗೆ ಕೈ ಜೋಡಿಸಿ ತರುವಲ್ಲಿ ಹಾಗೂ ಕೋವಿಡ್-19 ರ ಬಗ್ಗೆ ಜಾಗೃತಿ ಮೂಡಿಸಲು ಶ್ರಮಿಸಿದೆ.

ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆ ಪ್ರಾರಂಭಿಸಿದ ಹಸಿವು ನಿವಾರಣಾ ಸಹಾಯವಾಣಿ 15521 ಕಾರ್ಯವನ್ನು ಹಾಗೂ ವಲಸೆ ಕಾರ್ಮಿಕರಿಗೆ ತಯಾರಿಸಿದ ಆಹಾರ ಹಂಚಿಕೆ ಜವಾಬ್ದಾರಿ ಪಿ.ಆರ್.ಎಸ್. ಚೇತನ್ ಕಮಾಂಡಿಂಗ್ ಆಫೀಸರ್ ಇವರ ನೇತೃತ್ವದ ಕ್ಷಿಪ್ರ ಕಾರ್ಯಾಚರಣೆ ತಂಡದೊಂದಿಗೆ ದಿನಾಂಕ:30-05-2020 ರಿಂದ 10-04-2020 ರ ಅವಧಿಯಲ್ಲಿ ನಿಸ್ವಾರ್ಥದಿಂದ ಶ್ರಮಿಸಿ ಹಸಿವಿನೊಂದಿಗೆ ಬಳಲುತ್ತಿರುವವರಿಗೆ ಆಹಾರ ತಲುಪಿಸಲು ಯಶಸ್ವಿಯಾಗಿರುತ್ತಾರೆ. ನಾಗರಿಕ ರಕ್ಷಣಾ ಪಡೆಯು 15 ಲಕ್ಷ ಆಹಾರ

ಪೊಟ್ಟಣಗಳ ವಿತರಣೆ ಮಾಡುವಲ್ಲಿ ಅನನ್ಯ ಸಾಧನೆ ಮಾಡಿರುತ್ತಾರೆ. ಈ ಕಾರ್ಯವನ್ನು ಕೇಂದ್ರ ಸರ್ಕಾರ ಶ್ಲಾಘಿಸಿದೆ ಹಾಗೂ ಇತರೆ ರಾಜ್ಯಗಳಿಗೆ ಈ ಮಾದರಿಯನ್ನು ಅಳವಡಿಸಲು ಸೂಚಿಸಿದೆ.

ದಿನಾಂಕ 19-03-2020 ರಿಂದ 20-04-2020 ರ ಅವಧಿಯಲ್ಲಿ ನಾಗರಿಕ ರಕ್ಷಣಾಪಡೆಯು ಸೇವೆ ಸಲ್ಲಿಸಿದ ವಿವಿಧ ಕ್ಷೇತ್ರಗಳ ವಿವರ ಇಂತಿದೆ :

19-03-2020 ರಿಂದ 20-04-2020 ರವರೆಗೆ 24 x 7 ಸಾಮಾಜಿಕ ಮಾಧ್ಯಮ ಕೊಠಡಿಯಲ್ಲಿ ಸಾರ್ವಜನಿಕ ಕುಂದು ಕೊರತೆಗಳಿಗೆ ಸ್ಪಂದಿಸುವುದು. 19-03-2020 ರಿಂದ 24-04-2020 ಪೊಲೀಸ್ ಇಲಾಖೆಗೆ ಕಾನೂನು ಸುವ್ಯವಸ್ಥೆ ಹಾಗೂ ಲಾಕ್‌ಡೌನ್ ಜಾರಿಗೆ ನೆರವು. ದಿನಾಂಕ 19-03-2020 ರಿಂದ 20-04-2020 ವರೆಗೆ ಕೋರೊನಾ ವೈರಸ್ ಬಗ್ಗೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ. 01-04-2020 ರಿಂದ 20-04-2020 ವರೆಗೆ ಮಾಸ್ಕ್‌ಗಳನ್ನು ಹೊಲೆದು ಉಚಿತವಾಗಿ ವಿತರಿಸುವ ಕಾರ್ಯ, 22-03-2020 ರಿಂದ 20-04-2020 ಹಿರಿಯ ನಾಗರೀಕರು ಹಾಗೂ ಅಂಗವಿಕಲರಿಗೆ ವಿಶೇಷ ವೈದ್ಯಕೀಯ ಸಹಾಯ ಪಡೆಯಲು ಲೋಕೋಪಕಾರಿ ಸಹಾಯ. 30-03-2020 ರಿಂದ 10-04-2020 ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆ ಪ್ರಾರಂಭಿಸಿದ ಹಸಿವು ನಿವಾರಣಾ ಕಾರ್ಯಕ್ರಮದಲ್ಲಿ ವಲಸೆ ಕಾರ್ಮಿಕರಿಗೆ ಆಹಾರ ಹಂಚುವಿಕೆ, 03-04-2020 ರಿಂದ 20-4-2020 ವರೆಗೆ ಅಕ್ಷಯಪಾತ್ರೆ ಸಹಯೋಗದೊಂದಿಗೆ 1.3 ಲಕ್ಷ ಪಡಿತರ ಪೊಟ್ಟಣ ಕಾರ್ಯ, 20-3-2020 ರಿಂದ 20-4-2020 ವರೆಗೆ ಮುಖ್ಯಮಂತ್ರಿಗಳ ಕೋವಿಡ್ -19 ವಾರ್‌ರೂಂ ನಲ್ಲಿ ನಕಲು ಸಾಮಾಜಿಕ ಮಾಧ್ಯಮಗಳ ಸುದ್ದಿಗಳನ್ನು ಬಯಲು ಮಾಡುವ ಸಹಾಯ ಹಸ್ತ, 18-4-2020 ರಿಂದ 20-4-2020 ವರೆಗೆ ವಲಸೆ ಮಹಿಳೆಯರಿಗೆ ನೈರ್ಮಲ್ಯ ಕರವಸ್ತ್ರ ಹಾಗೂ ಕ್ಯಾಲ್ಸಿಯಂ ಮಾತ್ರೆಗಳ ವಿತರಣೆ ಕಾರ್ಯ, 30-3-2020 ರಿಂದ 20-4-2020 ವರೆಗೆ ಪಶು ಹಾಗೂ ಸಾಕು ಪ್ರಾಣಿಗಳಿಗೆ ಆಹಾರ ಉಣಿಸುವ ಕಾರ್ಯ, 25-03-2020 ರಿಂದ 20-4-2020 ರವರೆಗೆ ದಿಗ್ಬಂಧನಕ್ಕೆ ಒಳಗಾದ ಕೋವಿಡ್ ಸೋಂಕಿತರ ಮೇಲೆ ನಿಗಾ ಇಡುವಲ್ಲಿ ಆರೋಗ್ಯ ಹಾಗೂ ಪೊಲೀಸ್ ಇಲಾಖೆಗೆ ನೆರವು, 18-04-2020 ರಿಂದ 20-04-2020 ವರೆಗೆ 100 ಬೈಕ್ ಸವಾರರು 10,000 ಆಹಾರ ಪೊಟ್ಟಣಗಳನ್ನು ಬೆಂಗಳೂರು ನಗರದಾದ್ಯಂತ ವಿತರಣೆ, 19-04-2020 ರಿಂದ 20-04-2020 ವರೆಗೆ ಮುಖ್ಯಮಂತ್ರಿಗಳು ಹೊರಡಿಸಿದ ಕರಪತ್ರಗಳನ್ನು ವಲಸೆ ಕಾರ್ಮಿಕರಿಗೆ ತಲುಪಿಸುವ ಕಾರ್ಯ, 25-03-2020 ರಿಂದ 20-04-2020 ರವರೆಗೆ ವಲಸೆ ಮಹಿಳೆಯರಿಗೆ ತುರ್ತು ಸಂದರ್ಭದಲ್ಲಿ ವಸತಿ ಮತ್ತು ಆರೋಗ್ಯ ಒದಗಿಸುವ ಕಾರ್ಯ.

ಸಿವಿಲ್ ಡಿಫೆನ್ಸ್ ವಾರ್ಡನ್‌ಗಳು ಮಾರ್ಚ್ 20 ರಿಂದ ಕೋರೋನಾ ವಾರಿಯರ್ಸ್ ಆಗಿ ಸಂಕಷ್ಟ ಸಮಯದಲ್ಲಿ ಹಗಲು ರಾತ್ರಿ ಸಹಾಯ ಮಾಡುವಲ್ಲಿ ನೆರವಾಗಿ ಕೋವಿಡ್ -19 ಲಾಕ್‌ಡೌನ್ ಯಶಸ್ವಿಯಾಗಿಸುವಲ್ಲಿ ಶ್ರಮಿಸಿರುತ್ತಾರೆ.

# KARNATAKA CIVIL DEFENCE

## COVID -19 OPERATIONS BY CIVIL DEFENCE CORPS

In the wake of Covid-19 threat, Government of Karnataka initiated several measures to stop spread of Corona Virus in Karnataka.

Civil Defence Corps was one of the first departments to initiate several proactive measures to supplement the efforts of various line departments in creating awareness and to stop spread of Corona Virus by deploying 2500 Civil Defence personnel on various duties.

Labour Department, Govt. of Karnataka started Hunger Helpline 155214 and entrusted the responsibility of distributing the food to migrant labourers to Civil Defence , the team headed by Commanding Officer Dr.P.R.S.Chetan along with QRT worked selflessly to ensure the food reaches the needy every day. Civil Defence has the unique distinction of having distributed over **1.5 million food packets** from 30th March to 10th April 2020, which was highlighted by Govt. of India as best practice in its national briefing on Covid-19.

**The following are the major areas of service rendered by Civil Defence from 19/3/2020 to 20/4/2020 to contain spread of Corona Virus:**

| From | To | Duties deployed for | No of deployed |
|---|---|---|---|
| 19/3/2020 | 20/4/2020 | 24x7 Social Media Control Room answering over 25000 social media queries every day. | 30 |
| 19/3/2020 | 20/4/2020 | Law & order & lock down enforcement assistance to | 500 |

| | | | |
|---|---|---|---|
| | | Police | |
| 19/3/2020 | 20/4/2020 | Contain spread of corona virus by creating various awareness programs & social distancing markings. | 700 |
| 15/04/2020 | 20/4/2020 | Stitching and free distribution of cotton Masks by Civil Defence | 150 |
| 22/03/2020 | 20/4/2020 | Humanitarian assistance to senior citizens and physically challenged by helping them with hospital visits and providing them with medicines. | 500 |
| 30/3/2020 | 10/4/2020 | Responsibility of distributing 2 Lakh food packets for Labour Hunger Helpline food request to migrant labouerers across Bangalore & parts of rural dist. | 200 |
| 03/4/2020 | 20/4/2020 | Packing **1.3 Lakhs Grocery** Kits for Government of Karnataka in association with Akshaya Patra for distribution to needy. | 130 |
| 20/3/2020 | 20/4/2020 | Assistance at CM's war room to bust fake social media message | 10 |
| 18/4/2020 | 20/4/2020 | Distribution of Sanitary napkins and calcium tablets to women | 30 |
| 30/3/2020 | 20/4/2020 | Feeding cattle's and pets | 50 |
| 25/3/2020 | 20/4/2020 | Helping Health department and Police in having watch on quarantined patients. | 100 |
| 18/4/2020 | 20/4/2020 | 100 Hunger Warriors on bikes travel across Bangalore to deliver **10000 food packets** to the needy every day. | 100 |
| 19/4/2020 | 20/4/2020 | Reaching out to migrant labouerers with message from | 50 |

| | | | |
|---|---|---|---|
| | | Chief Minister in Hindi | |
| 25/3/2020 | 20/4/2020 | Attending distress calls from women folk of migrant families for medical help, shelter and food. | 50 |

Civil Defence wardens are working day and night as true 'CORONA WARRIORS" since 20th March to mitigate the sufferings of people in this tough time of lock down caused due to Covid-19.

For any further clarifications, Kindly call Dr.P.R.S.CHETAN , Officer Commanding (Head Qtrs & Operations) , Civil Defence on 98450 34460

## ಸಚಿವರ ಪ್ರವಾಸ

**ಬೆಂಗಳೂರು, 21 ಏಪ್ರಿಲ್ 2020 (ಕರ್ನಾಟಕ ವಾರ್ತೆ):**

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವ ಜಗದೀಶ್ ಶೆಟ್ಟರ್ ಅವರು ಏಪ್ರಿಲ್ 22 ರಂದು ಬೆಂಗಳೂರಿನಿಂದ ಹುಬ್ಬಳ್ಳಿಗೆ ಪ್ರಯಾಣ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಂಕಷ್ಟದಲ್ಲಿರುವ ಕಲಾವಿದರು/ಸಾಹಿತಿಗಳಿಗೆ ಆರ್ಥಿಕ ಸಹಾಯ

**ಬೆಂಗಳೂರು, 21 ಏಪ್ರಿಲ್ 2020 (ಕರ್ನಾಟಕ ವಾರ್ತೆ):**

ಪ್ರಸ್ತುತ ಕೋವಿಡ್ 19 ಕೊರೋನಾ ರೋಗಾಣುವಿನಿಂದ ಇಡೀ ರಾಜ್ಯ ಲಾಕ್‌ಡೌನ್ ಆಗಿದ್ದು ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರು/ಸಾಹಿತಿಗಳಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆರ್ಥಿಕ ಸಹಾಯ ಮಾಡಲು ನಿರ್ಧರಿಸಿದೆ.

ಆರ್ಥಿಕವಾಗಿ ಸಂಕಷ್ಟದಲ್ಲಿರುವ ಎಲ್ಲಾ ಕಲಾ ಪ್ರಕಾರದ ಕಲಾವಿದರು/ಸಾಹಿತಿಗಳು ಅರ್ಜಿ ಸಲ್ಲಿಸಬಹುದಾಗಿದೆ. ವೃತ್ತಿನಿರತ ಕಲಾವಿದರಾಗಿದ್ದು ಕನಿಷ್ಠ 10 ವರ್ಷ ಕಲಾಸೇವೆ ಮಾಡಿರಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಸಾಶನ ಪಡೆಯುತ್ತಿರಬಾರದು ಮತ್ತು ಯಾವುದೇ ಸರ್ಕಾರಿ ನೌಕರರಾಗಿರಬಾರದು(ರಾಜ್ಯ /ಕೇಂದ್ರ/ನಿಗಮ ಮಂಡಳಿ/ಸರ್ಕಾರಿ ಅನುದಾನಿತ ಸಂಸ್ಥೆಗಳು ಮತ್ತು ಅರೆ ಸರ್ಕಾರಿ ಸಂಸ್ಥೆಗಳು). ಈ ವ್ಯಾಪ್ತಿಗೆ ಒಳಪಡುವ ಕಲಾವಿದರು/ಸಾಹಿತಿಗಳು ತಮ್ಮ ಹೆಸರು ವಿಳಾಸ, ಕಲಾಪ್ರಕಾರ, ಆಧಾರ್

**ರಾಜ್ಯ ಮಟ್ಟದ ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆಯನ್ನು National Talent Search Examination (NTSE) ದಿನಾಂಕ 17-11-2019 ರಂದು ನಡೆಸಲಾಗಿತ್ತು. ರಾಜ್ಯಮಟ್ಟದ ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳ ಪಟ್ಟಿಯನ್ನು ಡಿ.ಎಸ್.ಇ.ಆರ್.ಟಿ. ವೆಬ್‌ಸೈಟ್www.dsert.kar.nic.in ನಲ್ಲಿ ಪ್ರಕಟಿಸಲಾಗಿದೆ. ಆಯ್ಕೆಯಾದವರ ಪಟ್ಟಿಯನ್ನು ಸಂಬಂಧಿಸಿದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿಯೂ (ಡಯಟ್) ಲಭ್ಯವಿರುತ್ತದೆ. ಈ ಪರೀಕ್ಷೆಯನ್ನು 116382 ವಿದ್ಯಾರ್ಥಿಗಳು ಬರೆದಿದ್ದು, ರಾಷ್ಟ್ರಮಟ್ಟದ ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆಗೆ ಒಟ್ಟು 393 ವಿದ್ಯಾರ್ಥಿಗಳು ಆಯ್ಕೆಯಾಗಿರುತ್ತಾರೆ. ರಾಷ್ಟ್ರಮಟ್ಟದ ಪರೀಕ್ಷೆ ಬೆಂಗಳೂರಿನಲ್ಲಿ ದಿನಾಂಕ 10-5-2020 ರಂದು ನಡೆಯಲಿದ್ದು ಪ್ರವೇಶ ಪತ್ರ / ಹಾಲ್ ಟಿಕೆಟ್‌ಗಳನ್ನು NCERT ವೆಬ್‌ಸೈಟ್‌ನಿಂದ www.ncert.nic.in ಮೇ -2020 ರಲ್ಲಿ ಡೌನ್ಲೋಡ್ ಮಾಡಿಕೊಳ್ಳಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಎಸ್. ಎಸ್. ಎಲ್.ಸಿ. ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದಿರಬೇಕು

**ಬೆಂಗಳೂರು, 21 ಏಪ್ರಿಲ್ 2020 (ಕರ್ನಾಟಕ ವಾರ್ತೆ):**

ಎಸ್‌ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ಮೂಡಿಸಲು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಅವರು ಕೈಗೊಂಡಿರುವ ಮಕ್ಕಳಿಗ ತಾವೇ ನೇರವಾಗಿ ಫೋನ್ ಮಾಡಿ ಮಾತನಾಡುವ ಧೈರ್ಯ ತುಂಬುವ ಕೈಂಕರ್ಯವನ್ನು ಮಂಗಳವಾರವೂ ಮುಂದುವರೆಸಿದರು.

ತಮ್ಮ ಕಚೇರಿಯಲ್ಲಿ ಮಧ್ಯಾಹ್ನ ತಾವೇ ಮೈಸೂರು ವಿಭಾಗದ ಮೈಸೂರು, ಹಾಸನ, ಚಾಮರಾಜನಗರ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳ ಸುಮಾರು ಹಲವಾರು ವಿದ್ಯಾರ್ಥಿಗಳಿಗೆ ಕರೆ ಮಾಡಿ ಪರೀಕ್ಷೆಗೆ ಹೇಗೆ ಸಿದ್ಧತೆ ನಡೆಸಿದ್ದೀರಿ, ಪರೀಕ್ಷೆ ಮಾಡಬೇಕೆ ಎಂದು ಕೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಎಲ್ಲ ಮಕ್ಕಳು, ತಡವಾದ್ರೂ ಪರವಾಯಿಲ್ಲ ಪರೀಕ್ಷೆ ಮಾಡಲೇ ಬೇಕು ಎಂದರು.

ಕೊರೋನಾ ಸೋಂಕಿನ ಹಿನ್ನಲೆಯಲ್ಲಿ ಪರೀಕ್ಷೆಗಳು ಮುಂದಕ್ಕೆ ಹೋಗಿದ್ದು, ಅಭ್ಯಾಸಕ್ಕೆ ಹೆಚ್ಚಿನ ಸಮಯ ದೊರೆತಿರುವುದು ಅನುಕೂಲವೇ ಆಗಿದೆ. ನಾವು ಪರೀಕ್ಷೆಗೆ ತಯಾರಾಗಿದ್ದೇವೆ ಎಂದು ಮಕ್ಕಳು ಶಿಕ್ಷಣ ಸಚಿವರೇ ಖುದ್ದಾಗಿ ಫೋನ್ ಮಾಡಿದಾಗ ಖುಷಿಯಿಂದಲೇ ಉತ್ತರಿಸಿದರು. ಸಚಿವರು ಮಕ್ಕಳ ತಂದೆ

ತಾಯಿಯರೊಂದಿಗೂ ಮಾತನಾಡಿ, ಮಕ್ಕಳಿಗೆ ಧೈರ್ಯ ಹೇಳಿ, ಲಾಕ್ ಡೌನ್ ಮುಗಿದ ತಕ್ಷಣವೇ ಪರೀಕ್ಷೆ ಮಾಡುತ್ತೇವೆ ಎಂದರು.

ಒಂದೆರೆಡು ದೂರದರ್ಶನ ಚಾನಲ್ ನಲ್ಲಿ ಎಸ್ ಎಸ್ ಎಲ್ ಸಿ ಪಠ್ಯದ ಪುನರಾವರ್ತನಾ ತರಗತಿಗಳು ನಡೆಯಲಿದ್ದು, ಅವುಗಳನ್ನು ಮಕ್ಕಳು ನೋಡಬೇಕೆಂದು ಸಚಿವರು ತಿಳಿಸಿದರು. ಚೆನ್ನಾಗಿ ಓದಿ ತಂದೆ ತಾಯಿಗಳಿಗೆ ಒಳ್ಳೆಯ ಹೆಸರು ತರಬೇಕೆಂದರು.

ಇದಲ್ಲದೇ ಬಾಗಲಕೋಟೆಯ ಇಳಕಲ್ ಕಂದಗಲ್ ನ ಇಬ್ಬರು, ಹೊನ್ನಾಳಿ ತಾಲೂಕು ಬೆನಕನಹಳ್ಳಿಯ ಮಕ್ಕಳೊಂದಿಗೂ ಸಚಿವರು ಮಾತನಾಡಿ ಧೈರ್ಯ ತುಂಬಿದರು. ಸಾರ್ ಕೊರೋನಾ ಸಾಧ್ಯವಾದಷ್ಟು ಬೇಗನೇ ಹೊರಟು ಹೋಗಲಿ ಎಂದು ನಾವೆಲ್ಲ ದಿನಂಪ್ರತಿ ಬೇಡಿಕೊಳ್ಳೋಣ ಎಂದು ವಿದ್ಯಾರ್ಥಿನಿಯೊಬ್ಬಳು ಸಚಿವರಿಗೆ ತಿಳಿಸಿದ್ದು ವಿಶೇಷವಾಗಿತ್ತು.